ನೌಕರರಿಗೆ ಭವಿಷ್ಯ ನಿಧಿಯ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಅರಕಲಗೂಡು ತಾಲ್ಲೂಕು ಮದಗನಹಳ್ಳಿ ಗ್ರಾಮದ ಸರ್ಕಾರಿ ಸ್ಟೋನ್ ಕ್ರಷರ್

1264(1114) ಶ್ರೀ ಪುಟ್ಟಣ್ಣ ಎ. (ಅರಕಲಗೂಡು) :— ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ಅಂತರ್ಜಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹಾಸನ ಜಿಲ್ಲೆ ಅರಕಲಗೂಡು ತಾಲ್ಲೂಕು ಮದಗನೂರು ಗ್ರಾಮದ ಸರ್ಕಾರಿ ಸ್ಟೋನ್ ಕ್ರಷರ್‌ನ್ನು ಗುತ್ತಿಗೆ ಬಾಡಿಗೆ ಆಧಾರದ ಮೇಲೆ ನೀಡಲಾಗಿದೆಯೇ;

ಆ) ನೀಡಲಾಗಿದಲ್ಲಿ, ಯಾರಿಗೆ ಯಾವ ದಿನಾಂಕದಿಂದ ಗುತ್ತಿಗೆ ಬಾಡಿಗೆ ಆಧಾರದ ಮೇಲೆ ನೀಡಲಾಗಿದೆ; ಷರತ್ತುಗಳೇನು? ಇದುವರೆಗೆ ಬರುತ್ತಿರುವ ಹಣವೆಷ್ಟು?

ಶ್ರೀ ವಿ. ಮುನಿಯಪ್ಪ (ಗಣಿ ಮತ್ತು ಭೂವಿಜ್ಞಾನ ಹಾಗೂ ಅಂತರ್ಜಲ ಸಚಿವರು) :—

ಅ) ಹಾಸನ ಜಿಲ್ಲೆ, ಅರಕಲಗೂಡು ತಾಲ್ಲೂಕು, ಮದಗನೂರು ಗ್ರಾಮದಲ್ಲಿ ಸರ್ಕಾರಿ ಸ್ಟೋನ್ ಕ್ರಷರ್ ಘಟಕ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಹುಣಸೂರಿನ ತಾಲ್ಲೂಕಿನಲ್ಲಿರುವ ಪಶು ಚಿಕಿತ್ಸಾ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವುದು.

1265(1225) ಶ್ರೀ ವಿ. ಶಾಮಣ್ಣ (ಹುಣಸೂರು) :— ಮಾನ್ಯ ಪಶು ಸಂಗೋಪನೆ ಮತ್ತು ಸಣ್ಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹುಣಸೂರು ತಾಲ್ಲೂಕಿನಾದ್ಯಂತ ಇರುವ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ? ಇದ್ದರೆ ಅವು ಯಾವುವು?

ಆ) ಅಯರಹಳ್ಳಿ ಹನಗೋಡು ಹೋಬಳಿ ಕೇಂದ್ರ ಸ್ಥಳದಲ್ಲಿರುವ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ವಿಷಯ ಪರಿಶೀಲನೆಯಲ್ಲಿದೆಯೇ?

ಇ) ಪರಿಶೀಲನೆಯಲ್ಲಿದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ? ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳೇನು?

ಈ) ಕೆಲವು ಅಧಿಸೂಚನೆಯಲ್ಲಿ ಈ ಕುರಿತು ಸರ್ಕಾರವು ಭರವಸೆಯನ್ನು ನೀಡಿದ್ದು, ಇದುವರೆಗೆ ಅನುಷ್ಠಾನಗೊಳ್ಳದಿರಲು ಕಾರಣವೇನು?